19.12.2024 (65)

# ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಎಂ. ನಾಗರಾಜು ಇವರ ಶೂನ್ಯ ವೇಳೆಯ ಪ್ರಸ್ತಾವನೆಗೆ ಸರ್ಕಾರದ ಉತ್ತರ

**ವಿಷಯ**: ದಿನಾಂಕ: 17.12.2024ರಂದು "ಮುಗಿಯುತ್ತಿಲ್ಲ ಆಸ್ಪತ್ರೆ ಕಟ್ಟಡ" ಎಂದು ವಿಜಯವಾಣಿ ದಿನಪತ್ರಿಕೆಯಲ್ಲಿ ವರದಿಯಾಗಿರುತ್ತದೆ.

"ಬೆಂಗಳೂರು ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಸಂಸ್ಥೆ (ಬಿಎಂಸಿಆರ್‌ಐ) ಅಡಿಯಲ್ಲಿರುವ ವಿಕ್ಟೋರಿಯಾ ಅಸ್ಪತ್ರೆ ಆವರಣದಲ್ಲಿ ತಲೆ ಎತ್ತುತ್ತಿರುವ ಸಾವಿರ ಹಾಸಿಗೆಗಳ ಬಹುಮಹಡಿ ಕಟ್ಟಡ ಕಾಮಗಾರಿ ಆರಂಭವಾಗಿ ಐದು ವರ್ಷಗಳು ಕಳೆದರೂ ಸೇವೆಗೆ ಸಿದ್ದವಾಗಿಲ್ಲ. ಗುಣಮಟ್ಟದ ಹಾಗೂ ಉಚಿತ ವೈದ್ಯಕೀಯ ಸೇವೆಗೆ ಹೆಸರಾಗಿರುವ ವಿಕ್ಟೋರಿಯಾ ಆಸ್ಪತ್ರೆಗೆ ರಾಜ್ಯ ಹಾಗೂ ಹೊರ ರಾಜ್ಯಗಳಿಂದಲೂ ನಿತ್ಯ ಸಾವಿರಾರು ಸಂಖ್ಯೆಯಲ್ಲಿ ರೋಗಿಗಳು ಆಗಮಿಸುತ್ತಾರೆ. 500ಕ್ಕೂ ಅಧಿಕ ಮಂದಿ ಒಳರೋಗಿಗಳಾಗಿ ಚಿಕಿತ್ಸೆ ಪಡೆಯುತ್ತಾರೆ. ಆಯುಷ್ಮಾನ್ ಭಾರತ್ ಸೇರಿ ವಿವಿಧ ಯೋಜನೆಗಳಡಿ ಚಿಕಿತ್ಸೆ ಲಭ್ಯ ಇರುವ ಕಾರಣ ರೋಗಿಗಳ ಸಂಖ್ಯೆ ವರ್ಷದಿಂದ ವರ್ಷಕ್ಕೆ ಹೆಚ್ಚಾಗುತ್ತಿದೆ. ಇದರಿಂದಾಗಿ ರೋಗಿಗಳಿಗೆ ಹಾಸಿಗೆಗಳ ಕೊರತೆಯಿಂದಾಗಿ ದಾಖಲಾತಿ ಪ್ರಕ್ರಿಯೆ ವಿಳಂಬವಾಗುತ್ತಿದೆ. ಈ ಸಮಸ್ಯೆಗೆ ಪರಿಹಾರವಾಗಿ ಸುಮಾರು 68.53 ಕೋಟಿ ರೂ. ವೆಚ್ಚದ ಕಟ್ಟಡ ನಿರ್ಮಾಣಕ್ಕೆ 2019ರ ಡಿಸೆಂಬರ್ 11ರಂದು ಆಗಿನ ಮುಖ್ಯಮಂತ್ರಿಯವರು ಶಂಕುಸ್ಥಾಪನೆ ನೆರವೇರಿಸಿದ್ದರು.

ವಿಕ್ಟೋರಿಯಾ ಆಸ್ಪತ್ರೆ ಮೂಲ ಕಟ್ಟಡದ ಪಕ್ಕದಲ್ಲಿ ಸುಮಾರು 2 ಲಕ್ಷ ಚದರ ಅಡಿ ವಿಸ್ತೀರ್ಣದಲ್ಲಿ ಆರಂಭವಾದ ಕಟ್ಟಡ ಕಾಮಗಾರಿ 18 ತಿಂಗಳಲ್ಲಿ ಪೂರ್ಣಗೊಳಿಸುವ ಗುರಿ ಹೊಂದಲಾಗಿತ್ತು. ಆದರೆ, 2020ರಲ್ಲಿ ಎದುರಾದ ಕೋವಿಡ್ ಸಾಂಕ್ರಾಮಿಕದಿಂದಾಗಿ ಕಾಮಗಾರಿ ವಿಳಂಬವಾಯಿತು. ನಂತರದಲ್ಲಿ, ಕಟ್ಟಡ ನಿರ್ಮಾಣ ಕಾರ್ಯದಲ್ಲಿ ಕೆಲ ಬದಲಾವಣೆಗಳನ್ನು ಮಾಡಿದ್ದರಿಂದ, ಕಾಮಗಾರಿ ಕುಂಟುತ್ತಾ ಸಾಗಿದೆ. ಅಲ್ಲದೆ ನಿರ್ಮಾಣ ವೆಚ್ಚವು 90 ಕೋಟಿ ರೂ.ಗೆ ಏರಿಕೆಯಾಗಿದೆ" ಎಂದು ದಿನಪತ್ರಿಕೆಯಲ್ಲಿ ಪ್ರಕಟವಾಗಿದ್ದು, ಸದರಿ ಸಾವಿರ ಹಾಸಿಗೆಗಳ ಬಹುಮಹಡಿ ಕಟ್ಟಡ ಕಾಮಗಾರಿಯನ್ನು ಶೀಘ್ರವಾಗಿ ಪೂರ್ಣಗೊಳಿಸಲು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಕ್ತ ನಿರ್ದೇಶನ ನೀಡುವಂತೆ ಪ್ರಸ್ತಾಪಿಸಲಾಗಿದೆ.

*****

**ಉತ್ತರ:** ಬೆಂಗಳೂರು ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಸಂಸ್ಥೆಯು (ಬಿಎಂಸಿಆರ್‌ಐ) ರಾಜ್ಯದ ಅತಿ ಹಳೆಯ ಹಾಗೂ ಪ್ರತಿಷ್ಠಿತ ಸರ್ಕಾರಿ ಸ್ವಾಯತ್ತ ವೈದ್ಯಕೀಯ ಮಹಾವಿದ್ಯಾಲಯವಾಗಿರುತ್ತದೆ. ಈ ಸಂಸ್ಥೆಯಲ್ಲಿ ಸ್ನಾತಕ ಮತ್ತು ಸ್ನಾತಕೋತ್ತರ ವೈದ್ಯಕೀಯ ಕೋರ್ಸುಗಳನ್ನು ನಡೆಸಲಾಗುತ್ತಿದೆ. ಈ ಸಂಸ್ಥೆಗೆ ವಿಕ್ಟೋರಿಯಾ, ವಾಣಿವಿಲಾಸ, ಮಿಂಟೋ ಮತ್ತು ಪಿಎಂಎಸ್‌ಎಸ್‌ವೈ ಆಸ್ಪತ್ರೆಗಳು ಬೋಧಕ ಮತ್ತು ರೆಫರಲ್ ಆಸ್ಪತ್ರೆಗಳಾಗಿ ಕಾರ್ಯನಿರ್ವಹಿಸುತ್ತಿವೆ.

ಸರ್ಕಾರದ ಆದೇಶ ಸಂಖ್ಯೆ: ಆಕುಕ 30 ಎಂಎಂಸಿ 2018, ದಿನಾಂಕ: 30.10.2018ರಲ್ಲಿ ಬೆಂಗಳೂರಿನ ವಿಕ್ಟೋರಿಯಾ ಆಸ್ಪತ್ರೆಯ ಆವರಣದಲ್ಲಿ 1000 ಹಾಸಿಗೆ ಸಾಮರ್ಥ್ಯದ ಹೆಚ್ಚುವರಿ ವಾರ್ಡ್ ನಿರ್ಮಾಣ ಕಾಮಗಾರಿಯ ರೂ. 59.00 (ಐವತ್ತೊಂಬತ್ತು ಕೋಟಿ ರೂಪಾಯಿಗಳು ಮಾತ್ರ) ಕೋಟಿಗಳ ಅಂದಾಜು ಪಟ್ಟಿಗೆ ಆಡಳಿತಾತ್ಮಕ ಅನುಮೋದನೆ ನೀಡಿ ಆದೇಶಿಸಿದೆ.

1000 ಹಾಸಿಗೆ ಆಸ್ಪತ್ರೆಯ ಕಟ್ಟಡದಲ್ಲಿ ಈ ಕೆಳಕಂಡ ಹೆಚ್ಚುವರಿ ಕಾಮಗಾರಿಗಳನ್ನು ನಿರ್ಮಾಣ ಮಾಡುವುದು ಅತ್ಯವಶ್ಯಕವಾಗಿರುವುದರಿಂದ ಕಾಮಗಾರಿಯ ಪರಿಷ್ಕೃತ ಅಂದಾಜು ಮೊತ್ತ ರೂ. 90.60 ಕೋಟಿಗಳಿಗೆ ಮುಖ್ಯ ಇಂಜಿನಿಯರ್, ಆ.ಕು.ಕ ರವರು ಪ್ರಸ್ತಾವನೆ ಸಲ್ಲಿಸಿರುತ್ತಾರೆ.

1. Radiology, CT Scan & MRI
2. Special Ward
3. ICU
4. Additional 6 No's Modular OT
5. Construction of New Helipad
6. Minor Ot
7. X-ray
8. Console Room
9. Ultrasound
10. Fluoroscopy

ಈ ಪರಿಷ್ಕೃತ ಅಂದಾಜು ಮೊತ್ತಕ್ಕೆ ಸಂಬಂಧಪಟ್ಟ ಪ್ರಾಧಿಕಾರದ ಸಹಮತಿ ಪಡೆದು, ಬೆಂಗಳೂರಿನ ವಿಕ್ಟೋರಿಯಾ ಆಸ್ಪತ್ರೆಯ ಆವರಣದಲ್ಲಿ 1000 ಹಾಸಿಗೆ ಸಾಮರ್ಥ್ಯದ ಹೆಚ್ಚುವರಿ ವಾರ್ಡ್ ನಿರ್ಮಾಣ ಕಾಮಗಾರಿಯ ಪರಿಷ್ಕೃತ ಅಂದಾಜು ಮೊತ್ತ ರೂ. 90.60 ಕೋಟಿಗಳಿಗೆ ಸರ್ಕಾರದ ಆದೇಶ ಸಂಖ್ಯೆ: ಎಂಇಡಿ 599 ಎಂಎಂಸಿ 2020, ದಿನಾಂಕ: 17.12.2024ರಲ್ಲಿ ಆಡಳಿತಾತ್ಮಕ ಅನುಮೋದನೆಯನ್ನು ನೀಡಲಾಗಿರುತ್ತದೆ.

ಸದರಿ ಸಾವಿರ ಹಾಸಿಗೆಗಳ ಆಸ್ಪತ್ರೆಯ ಕಟ್ಟಡ ಕಾಮಗಾರಿಯು ಭೌತಿಕವಾಗಿ ಶೇಕಡ 90 ರಷ್ಟು ಪೂರ್ಣಗೊಂಡಿರುತ್ತದೆ ಹಾಗೂ ಕಾಮಗಾರಿಯು ಪ್ರಗತಿಯಲ್ಲಿರುತ್ತದೆ.

ಸಂಖ್ಯೆ: ಎಂಇಡಿ 618 ಎಂಎಂಸಿ 2024

**(ಡಾ:ಶರಣಪ್ರಕಾಶ ಆರ್. ಪಾಟೀಲ)**
ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ,
ಉದ್ಯಮಶೀಲತೆ ಹಾಗೂ ಜೀವನೋಪಾಯ ಸಚಿವರು